# ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ

"ಸಾರಿಗೆ ಭವನ" ಕೇಂದ್ರ ಕಛೇರಿ, ಕೆ.ಹೆಚ್.ರಸ್ತೆ, ಶಾಂತಿ ನಗರ, ಬೆಂಗಳೂರು-560 027.
ಸಂಚಾರ (ವಾಣಿಜ್ಯ) ಇಲಾಖೆ,

**ಸಂ:ಕರಾಸಾ:ಕೇಕ:ಸಂ:ಪ2:554:111:2022-23** **ದಿನಾಂಕ:16.04.2022**

ಮುಖ್ಯ ಸಂಚಾರ ವ್ಯವಸ್ಥಾಪಕರು,
ವಾಕರಸಾ ಸಂಸ್ಥೆ / ಕಕರಸಾ ನಿಗಮ,
ಕೇಂದ್ರ ಕಛೇರಿ,
ಹುಬ್ಬಳ್ಳಿ / ಕಲಬುರ್ಗಿ.

ಎಲ್ಲಾ ಹಿರಿಯ / ವಿಭಾಗೀಯ ನಿಯಂತ್ರಣಾಧಿಕಾರಿಗಳು,
ಕರಾರಸಾ ನಿಗಮ.

ಮಾನ್ಯರೆ,

ವಿಷಯ : ದ್ವಿತೀಯ ಪಿ.ಯು.ಸಿ ವಾರ್ಷಿಕ ಪರೀಕ್ಷೆಗಳಿಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ನಿಗಮದ ಬಸ್‌ಗಳಲ್ಲಿ ಪರೀಕ್ಷಾ ದಿನಗಳಂದು ಉಚಿತವಾಗಿ ಪ್ರಯಾಣಿಸಲು ಅನುಮತಿಸುವ ಬಗ್ಗೆ.

ಉಲ್ಲೇಖ: 1. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆರವರ ಪತ್ರ ಸಂ.ಪಪೂಶಿ/ಪರೀಕ್ಷೆ/ದ್ವಿಪಿಪ/11/ 2021-22 ದಿನಾಂಕ: 11.04.2022.
2. ಸೂಕ್ತಾಧಿಕಾರಿಗಳ ಆದೇಶ ದಿನಾಂಕ: 13.04.2022.

****

ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ದಿನಾಂಕ: 22.04.2022 ರಿಂದ ಕರ್ನಾಟಕದ ದ್ವಿತೀಯ ಪಿ.ಯು.ಸಿ ವಿದ್ಯಾರ್ಥಿಗಳಿಗೆ ವಾರ್ಷಿಕ ಪರೀಕ್ಷೆಗಳು ಪ್ರಾರಂಭವಾಗಲಿವೆ. ಈ ಸಂಬಂಧ ವಿದ್ಯಾರ್ಥಿಗಳಿಗೆ ಅವರ ವಿದ್ಯಾಸಂಸ್ಥೆಯ ಹೊರತಾಗಿ ಇತರೆ ವಿದ್ಯಾಸಂಸ್ಥೆಗಳಿಗೆ ಪರೀಕ್ಷಾ ಕೇಂದ್ರಗಳ ನಿಯೋಜನೆಯಾಗಿರುವುದರಿಂದ, ಪರೀಕ್ಷಾ ಅವಧಿಯಲ್ಲಿ ವಿದ್ಯಾರ್ಥಿಗಳಿಗೆ ವಾಸಸ್ಥಳದಿಂದ ಪರೀಕ್ಷಾ ಕೇಂದ್ರಗಳವರೆಗೆ ನಿಗಮದ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಅನುಮತಿಸುವಂತೆ ಉಲ್ಲೇಖಿತ ಪತ್ರದಲ್ಲಿ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ರವರು ಕೋರಿರುತ್ತಾರೆ.

ಅದರನ್ವಯ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ, ಕ.ರಾ.ರ.ಸಾ.ನಿಗಮವು, **ದ್ವಿತೀಯ ಪಿಯುಸಿ ಪರೀಕ್ಷೆ ನಡೆಯುವ ದಿನಾಂಕಗಳಂದು ಅಂದರೆ ದಿನಾಂಕ 22-04-2022 ರಿಂದ 18-05-2022 ರವರೆಗೆ** ಪರೀಕ್ಷೆಗೆ ಹಾಜರಾಗುವ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳು ತಮ್ಮ ವಾಸಸ್ಥಳದಿಂದ ನಿಯೋಜಿತ ಪರೀಕ್ಷಾ ಕೇಂದ್ರದವರೆಗೆ ಮತ್ತು ಹಿಂದಿರುಗುವಾಗ **"ದ್ವಿತೀಯ ಪಿಯುಸಿ ಪರೀಕ್ಷಾ ಪ್ರವೇಶ ಪತ್ರವನ್ನು"** ತೋರಿಸಿ, ನಿಗಮದ ನಗರ, ಹೊರವಲಯ, ಸಾಮಾನ್ಯ ಹಾಗೂ ವೇಗದೂತ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ.

ಈ ಸಂಬಂಧ, ನಿಗಮದ ಎಲ್ಲಾ ಚಾಲಕ / ನಿರ್ವಾಹಕರುಗಳಿಗೆ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಪರೀಕ್ಷಾ ಅವಧಿಯಲ್ಲಿ ನಿಯೋಜಿತ ಪರೀಕ್ಷಾ ಕೇಂದ್ರಗಳಿಗೆ ತೆರಳಲು ಹಾಗೂ ವಾಸಸ್ಥಳಕ್ಕೆ ಮರಳಲು ಪರೀಕ್ಷಾ ಪ್ರವೇಶ ಪತ್ರದೊಂದಿಗೆ ಪ್ರಯಾಣಿಸಲು ಅನುಮತಿಸಲು ಸೂಕ್ತ ತಿಳುವಳಿಕೆ ನೀಡಲು ಸೂಚಿಸಲಾಗಿದೆ.

ಮುಂದುವರೆದು, ಪ್ರವೇಶ ಪತ್ರದ ಆಧಾರದ ಮೇಲೆ ಬಸ್ಸುಗಳ ಆಚರಣೆ ಮಾರ್ಗದಲ್ಲಿ ಪರೀಕ್ಷಾ ಕೇಂದ್ರಗಳಿಗೆ ತೆರಳಲು ವಿದ್ಯಾರ್ಥಿಗಳು ಬಸ್ಸನ್ನು ಹತ್ತುವವರಿದ್ದಲ್ಲಿ ಹಾಗೂ ಆಚರಣಾ ಮಾರ್ಗದಲ್ಲಿ ಪರೀಕ್ಷಾ ಕೇಂದ್ರಗಳಿದ್ದಲ್ಲಿ, ವಿದ್ಯಾರ್ಥಿಗಳು ಬಸ್ಸನ್ನು ಹತ್ತಲು / ಇಳಿಯಲು ಅನುಕೂಲವಾಗುವಂತೆ ಕೋರಿಕೆ ನಿಲುಗಡೆ ನೀಡಲು ಕ್ರಮ ಕೈಗೊಳ್ಳುವುದು.

ಚಾಲನಾ ಸಿಬ್ಬಂದಿಗಳು ಮೇಲ್ಕಂಡ ನಿರ್ದೇಶನಗಳನ್ನು ತಪ್ಪದೇ ಪಾಲಿಸುವಂತೆ ತಿಳಿಸುವುದು. ಈ ವಿಷಯವನ್ನು ಎಲ್ಲಾ ಘಟಕ ಮತ್ತು ಬಸ್ ನಿಲ್ದಾಣಗಳ ಸೂಚನಾ ಫಲಕಗಳಲ್ಲಿ ಪ್ರದರ್ಶಿಸಿ ಮೇಲ್ಕಂಡ ನಿರ್ದೇಶನಗಳನ್ನು ಜಾರಿಗೊಳಿಸಲು ಕ್ರಮ ವಹಿಸುವಂತೆ ಕೋರಿದೆ.

ತಮ್ಮ ವಿಶ್ವಾಸಿ
ಸಹಿ/-
ಮುಖ್ಯ ಸಂಚಾರ ವ್ಯವಸ್ಥಾಪಕರು (ವಾ)

ಪ್ರತಿಯನ್ನು ವಂದನಾಪೂರ್ವಕವಾಗಿ:

- ✓ ಮಾನ್ಯ ಅಧ್ಯಕ್ಷರು, / ಮಾನ್ಯ ಉಪಾಧ್ಯಕ್ಷರು, ಕರಾರಸಾ ನಿಗಮ, ರವರ ಆಪ್ತ ಕಾರ್ಯದರ್ಶಿಗಳು, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
- ✓ ವ್ಯವಸ್ಥಾಪಕ ನಿರ್ದೇಶಕರು, ಬೆಂಮಸಾಸಂಸ್ಥೆ / ವಾಕರಸಾಸಂಸ್ಥೆ / ಕಕರಸಾನಿಗಮ ಬೆಂಗಳೂರು / ಹುಬ್ಬಳ್ಳಿ / ಕಲಬುರ್ಗಿ ರವರ ಹಿರಿಯ ಆಪ್ತ ಕಾರ್ಯದರ್ಶಿಗಳು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
- ✓ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಭವನ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-560012 ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
- ✓ ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು / ನಿರ್ದೇಶಕರು (ಸಿ&ಜಾ) ಕ.ರಾ.ರ.ಸಾ. ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
- ✓ ಎಲ್ಲಾ ಇಲಾಖಾ ಮುಖ್ಯಸ್ಥರು, ಕ.ರಾ.ರ.ಸಾ. ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
- ✓ ಮುಖ್ಯ ಸಂಚಾರ ವ್ಯವಸ್ಥಾಪಕರು (ಕಾ), ಬೆಂಮಸಾಸಂಸ್ಥೆ ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.

ಮುಖ್ಯ ಸಂಚಾರ ವ್ಯವಸ್ಥಾಪಕರು (ವಾ)